# ಕರಾವಳಿ ಪ್ರವಾಸೋದ್ಯಮ ರಾಯಭಾರಿಯಾಗಿ ರಿಷಭ್ ಶೆಟ್ಟಿ

**ಬೆಂಗಳೂರು:** ಕನ್ನಡ ಚಿತ್ರರಂಗದ ಖ್ಯಾತ ನಟ ಹಾಗೂ ನಿರ್ದೇಶಕ ರಿಷಬ್ ಶೆಟ್ಟಿಯನ್ನು ಕರಾವಳಿ ಪ್ರವಾಸೋದ್ಯಮದ ರಾಯಭಾ- ರಿಯನ್ನಾಗಿ ನೇಮಿಸುವ ಕುರಿತು ರಾಜ್ಯ ಸರ್ಕಾರ ಗಂಭೀರ ಚಿಂತನೆ ನಡೆಸುತ್ತಿರುವುದು ಇದೀಗ ರಾಜಕೀಯ ಹಾಗೂ ಸಾಮಾಜಿಕ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ. ಈ ಸಂಬಂಧ ಸರ್ಕಾರದ ಮಟ್ಟದಲ್ಲಿ ಚರ್ಚೆಗಳು ನಡೆದಿರುವ ಬೆನ್ನಲ್ಲೇ ಕೆಲವು ಪ್ರಗತಿಪರ ಸಂಘಟನೆಗಳು ಮತ್ತು ಸಾಮಾಜಿಕ ಜಾಲತಾಣ ಬಳಕೆದಾರರು ವಿರೋಧ ವ್ಯಕ್ತಪಡಿಸಲು ಆರಂಭಿಸಿದ್ದಾರೆ.

ವಿಧಾನಸೌಧದಲ್ಲಿ ನಡೆದ ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿ ಕುರಿತ ಸಭೆಯಲ್ಲಿ ಪ್ರವಾಸೋದ್ಯಮ ಸಚಿವರು, ಹಿರಿಯ ಅಧಿಕಾ- ರಿಗಳು ಹಾಗೂ ವಿವಿಧ ಕ್ಷೇತ್ರಗಳ ಪ್ರತಿನಿಧಿಗಳೊಂದಿಗೆ ನಟ ರಿಷಬ್ ಶೆಟ್ಟಿ ಕೂಡ ಭಾಗವಹಿಸಿದ್ದರು. ಕರಾವಳಿ ಭಾಗದ ಪ್ರವಾಸೋದ್ಯಮವನ್ನು ಮತ್ತಷ್ಟು ಅಭಿವೃದ್ಧಿಪಡಿಸುವುದು, ಸ್ಥಳೀಯ ಕಲೆ- ಸಂಸ್ಕೃತಿಗೆ ಉತ್ತೇಜನ ನೀಡುವುದು ಹಾಗೂ ಪ್ರವಾಸಿಗರನ್ನು ಆಕರ್ಷಿಸಲು ಹೊಸ ಯೋಜನೆಗಳನ್ನು ರೂಪಿಸುವ ಕುರಿತು ಸಭೆಯಲ್ಲಿ ವಿಸ್ತೃತ ಚರ್ಚೆ ನಡೆದಿತ್ತು.

ಈ ಸಭೆಯಲ್ಲಿ ರಿಷಬ್ ಶೆಟ್ಟಿ ಅವರು ಕರಾವಳಿ ಭಾಗದ ಜನಪದ ಕಲೆ, ಯಕ್ಷಗಾನ,



ಸಾಂಪ್ರದಾಯಿಕ ಸಂಗೀತ, ಸ್ಥಳೀಯ ಸಂಸ್ಕೃತಿ ಹಾಗೂ ಪರಂಪರೆಯನ್ನು ಹೆಚ್ಚು ಪ್ರೋತ್ಸಾಹಿಸುವ ಅಗತ್ಯವಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಜೊತೆಗೆ ಕರಾವಳಿ ಪ್ರದೇಶದ ನೈಸರ್ಗಿಕ ಸೌಂದರ್ಯ ಮತ್ತು ಸಾಂಸ್ಕೃತಿಕ ವೈವಿಧ್ಯತೆಯನ್ನು ದೇಶ-ವಿದೇಶಗಳಲ್ಲಿ ಪರಿಣಾಮಕಾರಿಯಾಗಿ ಪ್ರಚಾರ ಮಾಡುವುದ- ರಿಂದ ಪ್ರವಾಸೋದ್ಯಮಕ್ಕೆ ಹೆಚ್ಚಿನ ಉತ್ತೇಜನ ಸಿಗಲಿದೆ ಎಂದು ಸಲಹೆ ನೀಡಿದರು.

ಸಭೆಯಲ್ಲಿ ಮಾತನಾಡಿದ ಅವರು, ಕರ್ನಾಟಕದ ಕರಾವಳಿ ಭಾಗವು ಸಿನಿಮಾ ಚಿತ್ರೀಕರಣಕ್ಕೆ ಅತ್ಯಂತ ಸೂಕ್ತ ಸ್ಥಳವಾಗಿದ್ದು, ಇಲ್ಲಿ ಮೂಲಸೌಕರ್ಯ ಮತ್ತು ಅನುಕೂಲಗಳನ್ನು ಇನ್ನಷ್ಟು ಹೆಚ್ಚಿಸಿದರೆ ಕನ್ನಡ ಮಾತ್ರವಲ್ಲದೆ ಕೇರಳ, ಗೋವಾ ಹಾಗೂ ಇತರ ರಾಜ್ಯಗಳ ಚಿತ್ರರಂಗಕ್ಕೂ ಹೆಚ್ಚಿನ ಪ್ರಯೋಜನವಾಗಲಿದೆ ಎಂದು ಗಮನ ಸೆಳೆದರು. ಕರಾವಳಿಯ ಪ್ರಕೃತಿ ಸೌಂದರ್ಯ, ಸಮುದ್ರ ತೀರಗಳು ಹಾಗೂ ಸಾಂಸ್ಕೃತಿಕ ವೈಶಿಷ್ಟ್ಯತೆಗಳು ಚಿತ್ರರಂಗವನ್ನು ಸೆಳೆಯುವ ಶಕ್ತಿಯನ್ನು ಹೊಂದಿವೆ ಎಂದು ಅವರು ಅಭಿಪ್ರಾಯಪಟ್ಟರು.

ಇದೇ ವೇಳೆ ರಿಷಬ್ ಶೆಟ್ಟಿಯನ್ನು ಕರಾವಳಿ ಪ್ರವಾಸೋದ್ಯಮದ ರಾಯಭಾ- ರಿಯನ್ನಾಗಿ ನೇಮಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸುತ್ತಿದೆ ಎಂಬ ಮಾಹಿತಿ ಹೊರಬಿದ್ದ ಬೆನ್ನಲ್ಲೇ ಸಾಮಾಜಿಕ ಜಾಲತಾಣಗಳಲ್ಲಿ ಚರ್ಚೆಗಳು ಆರಂಭವಾಗಿವೆ. ಕೆಲ ಪ್ರಗತಿಪರರು ಈ ನಿರ್ಧಾರಕ್ಕೆ ವಿರೋಧ ವ್ಯಕ್ತಪಡಿಸಿದ್ದು, ಸರ್ಕಾರ ಈ ವಿಚಾರದಲ್ಲಿ ಮರುಪರಿಶೀಲನೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.

ವಿರೋಧ ವ್ಯಕ್ತಪಡಿಸಿರುವ ಕೆಲವರು, ರಿಷಬ್ ಶೆಟ್ಟಿ ಅವರಿಗೆ ಬಲಪಂಥೀಯ ಚಿಂತನೆಗಳತ್ತ ಒಲವು ಇದೆ ಎಂದು ಆರೋಪಿಸುತ್ತಿದ್ದು, ಇಂತಹ ವ್ಯಕ್ತಿಯನ್ನು ಸರ್ಕಾರದ ಅಧಿಕೃತ ರಾಯಭಾರಿಯನ್ನಾಗಿ ನೇಮಿಸುವುದು ಸೂಕ್ತವಲ್ಲ ಎಂಬ ಅಭಿಪ್ರಾಯವನ್ನು ಸಾಮಾಜಿಕ ಜಾಲತಾಣಗಳ ಮೂಲಕ ವ್ಯಕ್ತಪಡಿಸುತ್ತಿದ್ದಾರೆ. ಕರಾವಳಿ ಪ್ರದೇಶವು ವಿವಿಧ ಸಂಸ್ಕೃತಿ, ಧರ್ಮ ಮತ್ತು ಚಿಂತನೆಗಳ ಸಮಾಗಮವಾಗಿರುವುದರಿಂದ ಎಲ್ಲ ವರ್ಗದ ಜನರನ್ನು ಪ್ರತಿನಿಧಿಸುವ ವ್ಯಕ್ತಿಯನ್ನು ಆಯ್ಕೆ ಮಾಡಬೇಕು ಎಂದು ಅವರು ವಾದಿಸಿದ್ದಾರೆ.

ಮತ್ತೊಂದೆಡೆ, ರಿಷಬ್ ಶೆಟ್ಟಿ ಪರವಾಗಿ ಹಲವರು ಬೆಂಬಲ ವ್ಯಕ್ತಪಡಿಸುತ್ತಿದ್ದು, ಕರಾವಳಿ ಭಾಗದ ಸಂಸ್ಕೃತಿ, ಪರಂಪರೆ ಮತ್ತು ಜನಜೀವನವನ್ನು ರಾಷ್ಟ್ರಮಟ್ಟದಲ್ಲಿ ಪರಿಚಯಿಸಿದ ವ್ಯಕ್ತಿಗಳಲ್ಲಿ ರಿಷಬ್ ಶೆಟ್ಟಿ ಪ್ರಮುಖರು ಎಂದು ಅಭಿಪ್ರಾಯಪಡುತ್ತಿದ್ದಾರೆ. ಅವರ ಸಿನಿಮಾಗಳು ಕರಾವಳಿ ಭಾಗದ ಸಂಸ್ಕೃತಿ ಮತ್ತು ಜನಪದ ಜೀವನವನ್ನು ಪರಿಣಾಮಕಾರಿಯಾಗಿ ಬಿಂಬಿಸಿರುವುದರಿಂದ ಅವರು ಈ ಜವಾಬ್ದಾರಿಗೆ ಸೂಕ್ತ ವ್ಯಕ್ತಿ ಎಂದು ಬೆಂಬಲಿಗರು ಹೇಳುತ್ತಿದ್ದಾರೆ.

ಸರ್ಕಾರದಿಂದ ಈ ಕುರಿತು ಇನ್ನೂ ಅಧಿಕೃತ ಘೋಷಣೆ ಹೊರಬಂದಿಲ್ಲ. ಆದರೆ ರಿಷಬ್ ಶೆಟ್ಟಿಯನ್ನು ಕರಾವಳಿ ಪ್ರವಾಸೋದ್ಯಮದ ರಾಯಭಾರಿಯನ್ನಾಗಿ ನೇಮಿಸುವ ಸಾಧ್ಯತೆ ಕು- ರಿತ ಚರ್ಚೆಗಳು ಈಗಾಗಲೇ ರಾಜಕೀಯ, ಸಾಂಸ್ಕೃತಿಕ ಹಾಗೂ ಸಾಮಾಜಿಕ ವಲಯಗಳಲ್ಲಿ ವ್ಯಾಪಕ ಚರ್ಚೆಗೆ ಕಾರಣವಾಗಿವೆ.

# ನವಿಲಿಗೆ ಹಲಾಲ್ ಮಾಡಿ ಮಾಂಸ ಮಾರಾಟ: ಆರೋಪಿ ಅರೆಸ್ಟ್



**ಬೆಂಗಳೂರು:** ರಾಷ್ಟ್ರಪಕ್ಷಿ ನವಿಲನ್ನು ಸೆರೆ ಹಿಡಿದು, ಹಲಾಲ್ ಮಾಡಿ ಮಾಂಸ ಮಾರಾಟ ಮಾಡುತ್ತಿದ್ದ ಆರೋಪಿಯನ್ನು ಬೆಂಗಳೂರು ಅರಣ್ಯ ಸಂಚಾರಿ ದಳ ಬಂಧಿಸಿದೆ.

ಆರೋಪಿ ಸಾದೀಕ್ ಪಾಷ ಬಂಧಿತ ಆರೋಪಿ. ಚಿಕ್ಕಬಳ್ಳಾಪುರ ತಾಲೂಕಿನ ಬೈಯಪ್ಪನಹಳ್ಳಿ ಗ್ರಾಮದ ತೋಟದ ಮನೆಯಲ್ಲಿ ಆರೋಪಿ ನವಿಲಿನ ಮಾಂಸ ಮಾರಾಟ ಮಾಡುತ್ತಿದ್ದ. ಬಂಧಿತನಿಂದ 3 ಕೆ.ಜಿ ನವಿಲಿನ ಮಾಂಸ, ನವಿಲಿನ ಮೊಟ್ಟೆ, ಮೂಳೆಗಳನ್ನು ವಶಪಡಿಸಿಕೊಳ್ಳಲಾಗಿದೆ. ಒಂದು ನವಿಲನ್ನು ರಕ್ಷಣೆ ಮಾಡಲಾಗಿದೆ

ಖಚಿತ ಮಾಹಿತಿ ಮೇರೆಗೆ ಅರಣ್ಯ ಸಂಚಾರಿ ದಳದ ಸಿಬ್ಬಂದಿ ಕಾರ್ಯಾಚರಣೆ ನಡೆಸಿದ್ದಾರೆ. ಆರೋಪಿ ವಿರುದ್ಧ ಚಿಕ್ಕಬಳ್ಳಾಪುರ ಅರಣ್ಯ ಇಲಾಖೆ ಕಚೇರಿಯಲ್ಲಿ ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ.

# ಹೈವೆಯಲ್ಲಿ ಸರಣಿ ಅಪಘಾತ: ಕಾರಿನಲ್ಲಿದ್ದ ನಾಲ್ವರು ಬಚಾವ್




**ನೆಲಮಂಗಲ:** ಇಲ್ಲಿನ ರಾಯರಪಾಳ್ಯ ಬಳಿ ಬೆಂಗಳೂರು-ತುಮಕೂರು ರಾಷ್ಟ್ರೀಯ ಹೆದ್ದಾ- ರಿಯಲ್ಲಿ ಸರಣಿ ಅಪಘಾತ ಸಂಭವಿಸಿದೆ. ಕೆಟ್ಟು ನಿಂತಿದ್ದ ಲಾರಿಗೆ ಕಾರು ಹಾಗೂ ಟ್ರಕ್ ಡಿಕ್ಕಿಯಾಗಿದೆ.

ಹೈವೆಯಲ್ಲಿ ಲಾರಿ ಕೆಟ್ಟು ನಿಂತಿತ್ತು. ಈ ಲಾರಿಗೆ ಹಿಂಬದಿಯಿಂದ ಕಾರು ಹಾಗೂ ಮತ್ತೊಂದು ಟ್ರಕ್ ಡಿಕ್ಕಿಯಾಗಿದೆ. ಕಾರು ಡಿಕ್ಕಿಯಾದ ರಭಸಕ್ಕೆ ಮುಂಭಾಗ ಜಖಂಗೊಂಡಿದೆ. ಕಾರಿನಲ್ಲಿದ್ದ ನಾಲ್ವರು ಅದೃಷ್ಟವಶಾತ್ ಪ್ರಾಣಪಾಯದಿಂದ ಪಾರಾಗಿದ್ದಾರೆ.

ನೆಲಮಂಗಲ ಸಂಚಾರಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಪಘಾತದಿಂದ ಹೆದ್ದಾರಿಯಲ್ಲಿ ಕೆಲಕಾಲ ಟ್ರಾಫಿಕ್ ಜಾಮ್ ಉಂಟಾಗಿತ್ತು.

# ನಗರದಲ್ಲಿ ಇಂದಿರಾ ಕ್ಯಾಂಟೀನ್‌ಗಳ ಬಾಗಿಲು ಬಂದ್!

**ತುಮಕೂರು:** ಬಡವರು, ಕಾರ್ಮಿಕರು, ದಿನಗೂಲಿ ನೌಕರರು ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗದ ಜನರಿಗೆ ಕಡಿಮೆ ದರದಲ್ಲಿ ಗುಣಮಟ್ಟದ ಆಹಾರ ಒದಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಆರಂಭಿಸಿದ್ದ ಮಹತ್ವಾಕಾಂಕ್ಷಿ ಇಂದಿರಾ ಕ್ಯಾಂಟೀನ್ ಯೋಜನೆ ಇದೀಗ ಸಂಕಷ್ಟಕ್ಕೆ ಸಿಲುಕಿದೆಯೇ ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಮೂಡತೊಡಗಿದೆ. ತುಮಕೂರು ನಗರದಲ್ಲಿರುವ ಇಂದಿರಾ ಕ್ಯಾಂಟೀನ್‌ಗಳ ಸ್ಥಿತಿ ಇದಕ್ಕೆ ಸಾಕ್ಷಿಯಾಗಿದ್ದು, ಕಳೆದ ಎಂಟು ದಿನಗಳಿಂದ ನಗರದ ಆರು ಇಂದಿರಾ ಕ್ಯಾಂಟೀನ್‌ಗಳು ಸಂಪೂರ್ಣವಾಗಿ ಬಾಗಿಲು ಮುಚ್ಚಿರುವುದು ನೂರಾರು ಬಡ ಜನರ ಆತಂಕಕ್ಕೆ ಕಾರಣವಾಗಿದೆ.

ಪ್ರತಿದಿನ ಬೆಳಗಿನ ಉಪಾಹಾರ, ಮಧ್ಯಾಹ್ನ ಹಾಗೂ ರಾತ್ರಿ ಊಟಕ್ಕಾಗಿ ಇಂದಿರಾ ಕ್ಯಾಂಟೀನ್‌ಗಳನ್ನೇ ಅವಲಂಬಿಸಿದ್ದ ಕಾರ್ಮಿಕರು, ಆಟೋ ಚಾಲಕರು, ವಲಸೆ ಕಾರ್ಮಿಕರು, ವೃದ್ಧರು ಹಾಗೂ ನಿರ್ಗತಿಕರು ಇದೀಗ ಆಹಾರಕ್ಕಾಗಿ ಪರದಾಡುವ ಪರಿಸ್ಥಿತಿ ಎದುರಿಸುತ್ತಿದ್ದಾರೆ. ಕಡಿಮೆ ವೆಚ್ಚದಲ್ಲಿ ಹೊಟ್ಟೆ ತುಂಬಿಸಿಕೊಳ್ಳಲು ಸಾಧ್ಯವಾಗುತ್ತಿದ್ದ ಯೋಜನೆ ಸ್ಥಗಿತಗೊಂಡಿರುವುದರಿಂದ ಅನೇಕ ಕುಟುಂಬಗಳ ಬದುಕಿನ ಮೇಲೆ ನೇರ ಪರಿಣಾಮ ಬೀರಿದೆ.

ಮಾಹಿತಿಗಳ ಪ್ರಕಾರ, ಇಂದಿರಾ ಕ್ಯಾಂಟೀನ್‌ಗಳಿಗೆ ಆಹಾರ ಪೂರೈಕೆ ಮತ್ತು ಅಡುಗೆ




ವ್ಯವಸ್ಥೆಯ ಗುತ್ತಿಗೆ ಪಡೆದ ಸಂಸ್ಥೆಗೆ ಹಲವು ತಿಂಗಳುಗಳಿಂದ ಬಾಕಿ ಹಣ ಪಾವತಿಯಾಗಿಲ್ಲ ಎನ್ನಲಾಗುತ್ತಿದೆ. ಈ ಕಾರಣದಿಂದಲೇ ಗುತ್ತಿಗೆದಾರರು ಸೇವೆ ಸ್ಥಗಿತಗೊಳಿಸಿರುವ ಸಾಧ್ಯತೆ ಇದೆ. ಗುತ್ತಿಗೆ ಸಂಸ್ಥೆಗೆ ಹಣ ಪಾವತಿಯಾಗದ ಕಾರಣ ಅಲ್ಲಿನ ಅಡುಗೆ ಸಿಬ್ಬಂದಿ ಹಾಗೂ ಇತರ ಕಾರ್ಮಿಕರಿಗೂ ಸುಮಾರು ಒಂದು ವರ್ಷದಿಂದ ವೇತನ ಬಾಕಿ- ಯಾಗಿದೆ ಎಂಬ ಆರೋಪಗಳು ಕೇಳಿಬಂದಿವೆ. ವೇತನ ಸಿಗದ ಹಿನ್ನೆಲೆಯಲ್ಲಿ ಅನೇಕ ಸಿಬ್ಬಂದಿ ಕೆಲಸ ತೊರೆದಿರುವುದಾಗಿ ತಿಳಿದುಬಂದಿದೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ತುಮಕೂರು ಮಹಾನಗರ ಪಾಲಿಕೆ ಅಧಿಕಾರಿಗಳು, ಗುತ್ತಿಗೆದಾರರು ಕೆಲ ನಿಯಮಗಳನ್ನು ಉಲ್ಲಂಘಿಸಿರುವ ಕಾರಣ ಅವರಿಗೆ ನೋಟಿಸ್ ನೀಡಲಾಗಿದೆ ಎಂದು ತಿಳಿಸಿದ್ದಾರೆ. ನೋಟಿಸ್‌ಗೆ ಇನ್ನೂ ಸಮರ್ಪಕ ಉತ್ತರ ಬಂದಿಲ್ಲ. ಹೀಗಾಗಿ ಸಮಸ್ಯೆ ಉಂಟಾಗಿದೆ ಎಂದು ಅಧಿಕಾರಿಗಳು ಸಮಜಾಯಿಷಿ ನೀಡಿದ್ದಾರೆ.

ಆದರೆ ಗುತ್ತಿಗೆದಾರರ ಪರವಾಗಿ ಕೇಳಿಬರುತ್ತಿರುವ ಮಾಹಿತಿಗಳು ಬೇರೆ ಚಿತ್ರಣ ನೀಡುತ್ತಿವೆ. ಅವರ ಪ್ರಕಾರ, ಕ್ಯಾಂಟೀನ್‌ಗಳನ್ನು ಏಕಾಏಕಿ ಬಂದ್ ಮಾಡಿಲ್ಲ. ಹಲವು ಬಾರಿ ಬಾಕಿ ಬಿಲ್‌ಗಳ ಪಾವತಿಗಾಗಿ ಜಿಲ್ಲಾಡಳಿತ ಮತ್ತು ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿ- ತ್ತು. ಆರಂಭದಲ್ಲಿ ವೆಚ್ಚ ಕಡಿಮೆ ಮಾಡಲು ರಾತ್ರಿ ಊಟದ ಸೇವೆ ಸ್ಥಗಿತಗೊಳಿಸಲಾಗಿತ್ತು. ಬಳಿಕ ಬೆಳಗಿನ ಉಪಾಹಾರ ಸೇವೆಯನ್ನೂ ನಿಲ್ಲಿಸಲಾಗಿತ್ತು. ಆದರೂ ಸಮಸ್ಯೆ ಬಗೆಹರಿಯದ ಕಾರಣ ಅಂತಿಮವಾಗಿ ಎಲ್ಲಾ ಸೇವೆಗಳನ್ನೂ ಸಂಪೂರ್ಣ ಸ್ಥಗಿತಗೊಳಿಸಲಾಗಿದೆ ಎನ್ನಲಾಗುತ್ತಿದೆ.

ಇನ್ನೂ ಗುತ್ತಿಗೆದಾರರಿಗೆ ಎಷ್ಟು ಮೊತ್ತದ ಬಿಲ್ ಬಾಕಿಯಿದೆ, ಎಷ್ಟು ತಿಂಗಳ ಹಣ ಪಾವತಿಯಾಗಬೇಕಿದೆ ಎಂಬ ಕುರಿತು ಸ್ಪಷ್ಟ ಮಾಹಿತಿ ಲಭ್ಯವಾಗಿಲ್ಲ. ಮತ್ತೊಂದೆಡೆ, ಗುತ್ತಿಗೆದಾರರು ನಿಜವಾಗಿಯೂ ನಿಯಮ ಉಲ್ಲಂಘನೆ ಮಾಡಿದ್ದಾರೆಯೇ ಅಥವಾ ಬಾಕಿ ಹಣ ಪಾವತಿಯಾಗದಿರುವುದೇ ಮೂಲ ಕಾರಣವೇ ಎಂಬ ಪ್ರಶ್ನೆಗೂ ಸ್ಪಷ್ಟ ಉತ್ತರ ಸಿಕ್ಕಿಲ್ಲ.

ಒಟ್ಟಾರೆ, ಅಧಿಕಾರಿಗಳು ಮತ್ತು ಗುತ್ತಿಗೆದಾರರ ನಡುವಿನ ಈ ಗೊಂದಲದ ಪರಿಣಾಮವಾಗಿ ಸಾರ್ವಜನಿಕ ಸೇವೆಯೇ ಸ್ಥಗಿತಗೊಂಡಿದ್ದು, ಅದರ ಹೊರೆ ಬಡ ಜನರ ಮೇಲೆ ಬಿದ್ದಿದೆ. ಸರ್ಕಾರದ ಜನಪರ ಯೋಜನೆಯಾಗಿ ಆರಂಭವಾದ ಇಂದಿರಾ ಕ್ಯಾಂಟೀನ್‌ಗಳು ಹೀಗೆ ದಿನಗಳ ಕಾಲ ಬಂದ್ ಆಗಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದ್ದು, ಕೂಡಲೇ ಸಮಸ್ಯೆ ಬಗೆಹರಿಸಿ ಸೇವೆ ಪುನರಾರಂಭಿಸಬೇಕೆಂದು ನಾಗರಿಕರು ಆಗ್ರಹಿಸಿದ್ದಾರೆ.

# ಶಾಲೆಗಳಲ್ಲಿ ಆನ್‌ಲೈನ್ ಫುಡ್ ಡೆಲಿವರಿಗೆ ನೋ ಎಂಟ್ರಿ!

**ಬೆಂಗಳೂರು:** ವಿದ್ಯಾರ್ಥಿಗಳ ಆರೋಗ್ಯ, ಶಾಲಾ ಶಿಸ್ತು ಹಾಗೂ ಭದ್ರತೆಯನ್ನು ಗಮನದಲ್ಲಿಟ್ಟುಕೊಂಡು ಬೆಂಗಳೂರು ನಗರದ ಹಲವು ಪ್ರತಿಷ್ಠಿತ ಶಾಲೆಗಳು ಮಹತ್ವದ ನಿರ್ಧಾರ ಕೈಗೊಂಡಿವೆ. ಶಾಲಾ ಆವರಣದೊಳಗೆ ಸ್ವಿಗ್ಗಿ, ಜೊಮ್ಯಾಟೊ ಸೇರಿದಂತೆ ವಿವಿಧ ಆನ್‌ಲೈನ್ ಫುಡ್ ಡೆಲಿವರಿ ಆಪ್‌ಗಳ ಮೂಲಕ ಆಹಾರ ಆರ್ಡರ್ ಮಾಡುವುದನ್ನು ನಿಷೇಧಿಸಲು ಮುಂದಾಗಿರುವುದು ಇದೀಗ ಪೋಷಕರು ಮತ್ತು ಶಿಕ್ಷಣ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ.

ಬನಶಂಕರಿಯಲ್ಲಿರುವ ಖ್ಯಾತ ವಿದ್ಯಾ ಸಂಸ್ಥೆಯಾದ ವಿದ್ಯಾಶಿಲ್ಪ ಶಾಲೆ ಇತ್ತೀಚೆಗೆ ಪೋಷಕ- ರಿಗೆ ಅಧಿಕೃತ ಸುತ್ತೋಲೆ ಹೊರಡಿಸಿ ಈ ನಿಯಮವನ್ನು ಜಾರಿಗೆ ತಂದಿದೆ. ಇದರ ಬೆನ್ನಲ್ಲೇ ನಗರದ ಇತರ ಪ್ರಮುಖ ಖಾಸಗಿ ಶಾಲೆಗಳೂ ಇದೇ ಮಾದರಿಯ ಕ್ರಮ ಕೈಗೊಳ್ಳಲು ಮುಂದಾಗಿವೆ ಎನ್ನಲಾಗಿದೆ. ಶಾಲಾ ವೇಳೆಯಲ್ಲಿ ವಿದ್ಯಾರ್ಥಿಗಳಿಗೆ ಹೊರಗಿನಿಂದ ಆಹಾರ ಪಾರ್ಸೆಲ್‌ಗಳನ್ನು ತಲುಪಿಸುವುದನ್ನು ಸಂಪೂರ್ಣವಾಗಿ ನಿರ್ಬಂಧಿಸುವ ಬಗ್ಗೆ ಆಡಳಿತ ಮಂಡಳಿಗಳು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುತ್ತಿವೆ.

ಶಾಲಾ ಆಡಳಿತ ಮಂಡಳಿಗಳ ಪ್ರಕಾರ, ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಶಾಲೆಯ ಸಮಯದಲ್ಲಿಯೇ ಮೊಬೈಲ್ ಅಥವಾ ಪೋಷಕರ ಸಹಾಯದಿಂದ ಆನ್‌ಲೈನ್ ಮೂಲಕ ವಿವಿಧ ಆಹಾರ ಪದಾರ್ಥಗಳನ್ನು ಆರ್ಡರ್ ಮಾಡುವ ಪ್ರವೃತ್ತಿ ಹೆಚ್ಚಾಗಿದೆ. ಪಿಜ್ಜಾ, ಬರ್ಗರ್, ಫ್ರೈಡ್ ಫುಡ್, ಸಾಫ್ಟ್ ಡ್ರಿಂಕ್ಸ್ ಸೇರಿದಂತೆ ಜಂಕ್ ಫುಡ್‌ಗಳ ಬಳಕೆ ಮಕ್ಕಳಲ್ಲಿ ಹೆಚ್ಚುತ್ತಿರುವುದು ಆರೋಗ್ಯದ ದೃಷ್ಟಿಯಿಂದ ಕಳವಳಕಾರಿಯಾಗಿದೆ. ಇಂತಹ ಆಹಾರಗಳಲ್ಲಿ ಅತಿಯಾದ ಎಣ್ಣೆ, ಉಪ್ಪು, ಸಕ್ಕರೆ ಹಾಗೂ ಕೃತಕ ಸಂರಕ್ಷಕ ಪದಾರ್ಥಗಳು (ಪ್ರಿಸರ್ವೇಟಿವ್‌ಗಳು) ಇರುವ ಸಾಧ್ಯತೆ ಹೆಚ್ಚಿದ್ದು, ದೀರ್ಘಾವಧಿಯಲ್ಲಿ ಮಕ್ಕಳ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟುಮಾಡಬಹುದು ಎಂದು ಶಾಲೆಗಳು ಅಭಿಪ್ರಾಯಪಟ್ಟಿವೆ.

ಮಕ್ಕಳಲ್ಲಿ ಆರೋಗ್ಯಕರ ಆಹಾರ ಪದ್ಧತಿಯನ್ನು ಬೆಳೆಸುವ ಉದ್ದೇಶದಿಂದಲೇ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಶಾಲೆಗಳು ಸ್ಪಷ್ಟಪಡಿಸಿವೆ. ಮನೆಯಲ್ಲೇ ತಯಾರಿಸಿದ ಆಹಾರ ಅಥವಾ ಪೌಷ್ಟಿಕಾಂಶಯುಕ್ತ ಊಟ ಸೇವಿಸುವ ಅಭ್ಯಾಸ ಬೆಳೆಸುವುದು ಶಿಕ್ಷಣ ಸಂಸ್ಥೆಗಳ ಜವಾಬ್ದಾರಿಯೂ ಆಗಿದೆ ಎಂಬ ಅಭಿಪ್ರಾಯವೂ ವ್ಯಕ್ತವಾಗಿದೆ.

ಇದರ ಜೊತೆಗೆ ಶಾಲಾ ವಾತಾವರಣದಲ್ಲಿ ಸಮಾನತೆ ಕಾಪಾಡುವುದು ಕೂಡ ಈ ನಿರ್ಧಾರದ ಪ್ರಮುಖ ಉದ್ದೇಶವಾಗಿದೆ. ಕೆಲ ವಿದ್ಯಾರ್ಥಿಗಳು ಮನೆಯಿಂದ ತಂದ ಸಾಮಾನ್ಯ ಊಟ ಸೇವಿಸುತ್ತಿದ್ದರೆ, ಇನ್ನು ಕೆಲವರು ದುಬಾರಿ ಆಹಾರ ಪದಾರ್ಥಗಳನ್ನು ಆನ್‌ಲೈನ್ ಮೂಲಕ ಆರ್ಡರ್ ಮಾಡಿಕೊಳ್ಳುತ್ತಿರುವುದು ವಿದ್ಯಾರ್ಥಿಗಳ ನಡುವೆ ತಾರತಮ್ಯದ ಭಾವನೆ ಮೂಡಿಸುವ ಸಾಧ್ಯತೆ ಇದೆ. ಇದು ಮಕ್ಕಳಲ್ಲಿ ಅನಗತ್ಯ ಆಕರ್ಷಣೆ, ಹೋಲಿಕೆ ಮತ್ತು ಸಾಮಾಜಿಕ ಒತ್ತಡಕ್ಕೆ ಕಾರಣವಾಗಬಹುದು ಎಂದು ಶಿಕ್ಷಣ ತಜ್ಞರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಪೋಷಕರ ಮೇಲೂ ಇದರಿಂದ ಹೆಚ್ಚುವರಿ ಆರ್ಥಿಕ ಒತ್ತಡ ಉಂಟಾಗಬಹುದು ಎಂಬುದು ಶಾಲೆಗಳ ವಾದವಾಗಿದೆ. ಒಂದು ಮಗು ದುಬಾರಿ ಆಹಾರ ಆರ್ಡರ್ ಮಾಡುತ್ತಿರುವುದನ್ನು ಕಂಡು ಇತರ ಮಕ್ಕಳು ಸಹ ಅದೇ ರೀತಿಯ ಬೇಡಿಕೆಗಳನ್ನು ಇಡುವ ಸಾಧ್ಯತೆ ಇರುತ್ತದೆ. ಇದರಿಂದ ಅನಗತ್ಯ ವೆಚ್ಚ ಮತ್ತು ಒತ್ತಡ ಹೆಚ್ಚಾಗುತ್ತದೆ ಎಂದು ಶಾಲಾ ಆಡಳಿತ ಮಂಡಳಿಗಳು ಹೇಳಿವೆ.

ಭದ್ರತೆಯ ದೃಷ್ಟಿಯಿಂದಲೂ ಈ ಕ್ರಮ ಅತ್ಯಂತ ಅಗತ್ಯವಾಗಿದೆ ಎಂದು ಶಾಲೆಗಳು ತಿಳಿಸಿವೆ. ಪ್ರತಿದಿನ ಅನೇಕ ಡೆಲಿವರಿ ಸಿಬ್ಬಂದಿ ಶಾಲಾ ಆವರಣ- ಕ್ಕೆ ಪ್ರವೇಶಿಸುವುದು ವಿದ್ಯಾರ್ಥಿಗಳ ಸುರಕ್ಷತೆ ದೃಷ್ಟಿಯಿಂದ ಸೂಕ್ತವಲ್ಲ. ಶಾಲೆಗಳಲ್ಲಿ ಕಟ್ಟುನಿಟ್ಟಿನ ಭದ್ರತಾ ವ್ಯವಸ್ಥೆ ಜಾರಿಯಲ್ಲಿರುವ ಸಂದರ್ಭದಲ್ಲಿ ಅಪರಿಚಿತ ವ್ಯಕ್ತಿಗಳ ನಿರಂತರ ಓಡಾಟ ಸುರಕ್ಷತಾ ಸವಾಲುಗಳನ್ನು ಸೃಷ್ಟಿಸಬಹುದು ಎಂದು ಆಡಳಿತ ಮಂಡಳಿಗಳು ಅಭಿಪ್ರಾಯಪಟ್ಟಿವೆ.

ಅಲ್ಲದೆ, ಪ್ರತಿದಿನ ಹಲವು ಆಹಾರ ಪಾರ್ಸೆಲ್‌ಗಳನ್ನು ಸ್ವೀಕರಿಸುವುದು, ಅವುಗಳನ್ನು ವಿದ್ಯಾರ್ಥಿಗಳಿಗೆ ತಲುಪಿಸುವುದು ಹಾಗೂ ಸಂಬಂಧಿಸಿದ ದಾಖಲೆಗಳನ್ನು ನಿರ್ವಹಿಸುವುದು ಶಾಲೆಯ ಆಡಳಿತಾತ್ಮಕ ಕಾರ್ಯಗಳಿಗೆ ಹೆಚ್ಚುವರಿ ಹೊರೆ ಉಂಟುಮಾಡುತ್ತಿದೆ. ಇದರಿಂದ ಶಾಲೆಯ ಶಿಸ್ತು ಮತ್ತು ಸಮಯ ನಿರ್ವಹಣೆಯ ಮೇಲೂ ಪರಿಣಾಮ ಬೀರುತ್ತಿದೆ ಎಂದು ಹೇಳಲಾಗಿದೆ.

ಪೋಷಕರು ಅನಿವಾರ್ಯ ಸಂದರ್ಭಗಳಲ್ಲಿ ಮನೆಯಲ್ಲಿ ಅಡುಗೆ ಮಾಡಲು ಸಾಧ್ಯವಾಗದಿದ್ದರೆ, ಆರೋಗ್ಯಕರ ಆಹಾರವನ್ನು ಹೊರಗಿನಿಂದ ಖರೀದಿಸಿ ಸಾಮಾನ್ಯ ಲಂಚ್ ಬಾಕ್ಸ್‌ನಲ್ಲಿ ಪ್ಯಾಕ್ ಮಾಡಿ ಮಕ್ಕಳಿಗೆ ಕಳುಹಿಸುವಂತೆ ಶಾಲೆಗಳು ಮನವಿ ಮಾಡಿವೆ. ಶಾಲಾ ಆವರಣಕ್ಕೆ ನೇರವಾಗಿ ಆಹಾರ ಪಾರ್ಸೆಲ್‌ಗಳನ್ನು ಕಳುಹಿಸುವುದನ್ನು ಮಾತ್ರ ನಿರ್ಬಂಧಿಸಲಾಗುತ್ತಿದೆ ಎಂದು ಸ್ಪಷ್ಟಪಡಿಸಲಾಗಿದೆ.

ವಿಶೇಷವೆಂದರೆ, ಈ ನಿಯಮ ಕೇವಲ ವಿದ್ಯಾರ್ಥಿಗಳಿಗೆ ಮಾತ್ರ ಸೀಮಿತವಾಗಿಲ್ಲ. ಆರೋಗ್ಯಕರ ಆಹಾರ ಪದ್ಧತಿ ಮತ್ತು ಶಿಸ್ತಿನ ಬಗ್ಗೆ ವಿದ್ಯಾರ್ಥಿಗಳಿಗೆ ಉತ್ತಮ ಮಾದರಿಯಾಗುವ ಉದ್ದೇಶದಿಂದ ಶಿಕ್ಷಕರು ಹಾಗೂ ಶಾಲಾ ಸಿಬ್ಬಂದಿಗೂ ಶಾಲಾ ಆವರಣದಲ್ಲಿ ಸ್ವಿಗ್ಗಿ, ಜೊಮ್ಯಾಟೊ ಸೇರಿದಂತೆ ಆನ್‌ಲೈನ್ ಫುಡ್ ಡೆಲಿವರಿ ಸೇವೆಗಳನ್ನು ಬಳಸುವುದಕ್ಕೆ ನಿರ್ಬಂಧ ವಿಧಿಸಲಾಗಿದೆ. ಆರೋಗ್ಯ, ಸಮಾನತೆ, ಶಿಸ್ತು ಹಾಗೂ ಭದ್ರತೆಯನ್ನು ಉತ್ತೇಜಿಸುವ ಉದ್ದೇಶದಿಂದ ಈ ಹೊಸ ನೀತಿಯನ್ನು ಹಲವು ಶಾಲೆಗಳು ಜಾರಿಗೆ ತರುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಶಿಕ್ಷಣ ಸಂಸ್ಥೆಗಳು ಇದೇ ಕ್ರಮ ಅನುಸರಿಸುವ ಸಾಧ್ಯತೆ ಇದೆ ಎಂದು ವರದಿಗಳು ತಿಳಿಸಿವೆ.

# ಕೆಂಪೇಗೌಡ ಜಯಂತಿಗೆ ಗಣ್ಯರಿಗೆ ಆಹ್ವಾನ



**ಬೆಂಗಳೂರು:** ಒಕ್ಕಲಿಗರ ಸಂಘ ವತಿಯಿಂದ ಪಕ್ಷಾತೀತವಾಗಿ ಆಯೋಜಿಸಿರುವ ಕಾರ್ಯಕ್ರಮ. 27/06/2026 ರಂದು ಯಲಹಂಕದ ಹೊಯ್ಸಳ ಕ್ರೀಡಾಂಗಣದಲ್ಲಿ ಆಯೋಜಿಸಿರುವ ಅದ್ಧೂರಿ ಕೆಂಪೇಗೌಡ ಜಯಂತಿ.

ಶ್ರೀ ನಾಡಪ್ರಭು ಕೆಂಪೇಗೌಡರ 517ನೇ ಜಯೋತ್ಸವದ ಪ್ರಯುಕ್ತ ಯಲಹಂಕ ತಾಲ್ಲೂಕು ಒಕ್ಕಲಿಗರ ಸಂಘದ ವತಿಯಿಂದ "ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ. ನಂಜಾವಧೂತ ಮಹಾಸ್ವಾಮೀಜಿ" ರವರನ್ನು ಆಹ್ವಾನಿಸಲಾಯಿತು.

ಮಾನ್ಯ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಆಗಮಿಸುವ ಸಾಧ್ಯತೆ. ಈ ಹಿನ್ನೆಲೆ ಮಠಾಧೀಶರು ಹಾಗೂ ಗಣ್ಯರಿಗೆ ಆಹ್ವಾನ. ಮಾಜಿ ಮುಖ್ಯಮಂತ್ರಿ ಡಿ ವಿ ಸದಾನಂದ ಗೌಡ. ಮಾಜಿ ಮಂತ್ರಿ ಡಾಕ್ಟರ್ ಅಶ್ವಥ್ ನಾರಾಯಣ್ ಆಗಮಿಸುವ ನಿರೀಕ್ಷೆ. ಚಿಕ್ಕಬಳ್ಳಾಪುರ ಸಂಸದ ಡಾ. ಕೆ ಸುಧಾಕರ್ ನೇತೃತ್ವದಲ್ಲಿ ಜರುಗಲಿರುವ ಅದ್ಧೂರಿ ಕಾರ್ಯಕ್ರಮ.

ಈ ಬಾರಿ ಯಲಹಂಕದಲ್ಲಿ ಎರಡು ಬಣಗಳ ಜಿದ್ದಾಜಿದ್ದಿಗೆ ಸಾಕ್ಷಿಯಾಗಲಿರುವ ಕಾರ್ಯಕ್ರಮ. ಶಾಸಕ ಎಸ್ ಆರ್ ವಿಶ್ವನಾಥ್ ರವರ ನೇತೃತ್ವದಲ್ಲಿ ಮತ್ತೊಂದು ಕಾರ್ಯಕ್ರಮಕ್ಕೆ ಸಿದ್ಧತೆ. ಯಲಹಂಕದಲ್ಲಿ ಸಾಕಷ್ಟು ಸಂಚಲನ ಸೃಷ್ಟಿಸಿರುವ ಈ ಬಾರಿಯ ಕೆಂಪೇಗೌಡ ಜಯಂತಿ.

# ಯುವತಿಯ ತಂದೆ ಬೈದಿದ್ದಕ್ಕೆ ಯುವಕ ಆತ್ಮಹತ್ಯೆ

**ಚಿಕ್ಕಮಗಳೂರು:** ಯುವತಿಯೊಬ್ಬಳು ಪ್ರಿಯಕರನ ಜೊತೆ ಓಡಿ ಹೋಗಿರುವುದಕ್ಕೆ ಯುವತಿಯ ತಂದೆ ಆಕೆಯ ಸ್ನೇಹಿತನಿಗೆ ಬೈದಿದ್ದಕ್ಕೆ ಮನನೊಂದು ಯುವಕ ಆತ್ಮಹತ್ಯೆಗೆ ಶರಣಾಗಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲೂಕಿನ ಕುಡ್ಲೂರು ಗ್ರಾಮದಲ್ಲಿ ನಡೆದಿದೆ.



ಮೃತನನ್ನ ಚಂದನ್ (20) ಎಂದು ಗುರುತಿಸಲಾಗಿದೆ. ಕುಡ್ಲೂರು ಗ್ರಾಮದ 18 ವರ್ಷದ ಯುವತಿಯೊಬ್ಬಳು ಪತ್ರ ಬರೆದಿಟ್ಟು ತನ್ನ ಪ್ರಿಯಕರನ ಜೊತೆ ಜೂ.14 ರಂದು ಹೋಗಿದ್ದಳು. ಈ ಬಗ್ಗೆ ಯುವತಿಯ ತಂದೆ ಆಕೆಯ ಸ್ನೇಹಿತ ಚಂದನ್‌ಗೆ ಆಕೆ ಹೋಗಲು ನೀನೇ ಕಾರಣ, ಎಲ್ಲಿದ್ದಾಳೆ ಅಂತ ಗೊತ್ತು ಹೇಳು ಎಂದು ಗಲಾಟೆ ಮಾಡಿದ್ದರು.

ನಾಪತ್ತೆ ಪ್ರಕರಣ ದಾಖಲಾದ ಬೆನ್ನಲ್ಲೇ ಮೊಬೈಲ್ ಕಾಲ್ ಲೀಸ್ಟ್ ಆಧಾರದ ಮೇಲೆ ಕಡೂರು ತಾಲೂಕಿನ ಬೀರೂರು ಪೊಲೀಸರು ಚಂದನ್‌ನನ್ನ ಕರೆಸಿ ವಿಚಾರಣೆ ಮಾಡಿ ಕಳುಹಿಸಿದ್ದರು. ಆದರೆ, ಜೂ.21ರ ಸಂಜೆ ವಿಚಾರಣೆ ಮುಗಿಸಿಕೊಂಡು ಮನೆಗೆ ಹೋದ ಚಂದನ್ ಆತ್ಮಹತ್ಯೆಗೆ ಶರಣಾಗಿದ್ದಾನೆ.

ಸಾಯುವ ಮುನ್ನ ತನ್ನ ತಾಯಿಗೆ ಯುವಕ ಮೆಸೇಜ್ ಮಾಡಿ, ಆ ಹುಡುಗಿ ಎಲ್ಲಿದ್ದಾಳೆ ಗೊತ್ತಿಲ್ಲ. ಆಕೆ ಹೋಗಿರೋದಕ್ಕೆ ಕಾರಣ ನಾನಲ್ಲ. ಊರಿನ ಜನ ನನ್ನನ್ನು ಒಂದು ರೀತಿ ನೋಡ್ತಿದ್ದಾರೆ. ಆ ಹುಡುಗಿ ಅಪ್ಪ ನನಗೆ ತುಂಬಾ ಬೈದ್ರು, ನನಗೆ ಬದುಕಲು ಇಷ್ಟ ಇಲ್ಲ. ಕ್ಷಮಿಸಿ ಎಂದು ತಿಳಿಸಿದ್ದ. ಬಳಿಕ ಆತ್ಮಹತ್ಯೆಗೆ ಶರಣಾಗಿದ್ದಾನೆ.

ಆ ಯುವತಿ ಕೂಡ ಅಪ್ಪನಿಗೆ ನನ್ನನ್ನು ಹುಡುಕಬೇಡಿ. ಚಂದನ್ ನನಗೆ ಅಣ್ಣನ ರೀತಿ ಅಂತ ಲೆಟರ್ ಬರೆದಿಟ್ಟು ಹೋಗಿದ್ದಳು. ಆದರೆ, ಪೊಲೀಸರು ವಿಚಾರಿಸಿದ್ದಕ್ಕೆ, ಹುಡುಗಿ ಅಪ್ಪ ಬೈದಿದ್ದಕ್ಕೆ, ಊರ ಜನ ಬೇರೆ ರೀತಿ ನೋಡಿದ್ದಕ್ಕೆ ಮನನೊಂದು ಯುವಕ ಆತ್ಮಹತ್ಯೆಗೆ ಶರಣಾಗಿದ್ದಾನೆ. ದಲಿತ ಸಂಘಟನೆಗಳು ಹುಡುಗಿ ಅಪ್ಪನ ಕಿರುಕುಳದಿಂದಲೇ ಆ ಯುವಕ ಆತ್ಮಹತ್ಯೆಗೆ ಶರಣಾಗಿದ್ದಾನೆ. ಅವನ ಸಾವಿಗೆ ನ್ಯಾಯ ಸಿಗಬೇಕು. ಯುವತಿ ಅಪ್ಪನ ಮೇಲೆ ಪ್ರಕರಣ ದಾಖಲಿಸಿ ಎಂದು ಠಾಣೆ ಬಳಿ ಜಮಾಯಿಸಿ ಆಕ್ರೋಶ ಹೊರಹಾಕಿದ್ದಾರೆ.


ಘಟನೆಯು ಕುಡ್ಲೂರು ಗ್ರಾಮದಲ್ಲಿ ತೀವ್ರ ಆಕ್ರೋಶ ಹಾಗೂ ಆತಂಕಕ್ಕೆ ಕಾರಣವಾಗಿದ್ದು, ಮೃತ ಚಂದನ್ ಕುಟುಂಬಸ್ಥರು ಮತ್ತು ದಲಿತ ಸಂಘಟನೆಗಳು ಯುವಕನ ಸಾವಿನ ಹಿಂದೆ ಇರುವ ಎಲ್ಲಾ ಕಾರಣಗಳನ್ನು ಸಮಗ್ರವಾಗಿ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿವೆ. ಮತ್ತೊಂದೆಡೆ, ನಾಪತ್ತೆಯಾಗಿರುವ ಯುವತಿಯ ಪತ್ತೆ ಕಾರ್ಯವನ್ನು ಪೊಲೀಸರು ಮುಂದುವರಿಸಿದ್ದು, ಆಕೆಯ ನಾಪತ್ತೆ ಮತ್ತು ಚಂದನ್ ಆತ್ಮಹತ್ಯೆ ನಡುವೆ ಯಾವುದೇ ಸಂಬಂಧವಿದೆಯೇ ಎಂಬುದರ ಕುರಿತೂ ತನಿಖೆ ನಡೆಸುತ್ತಿದ್ದಾರೆ. ಬೀರೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆಯ ಬಳಿಕ ಘಟನೆಯ ನೈಜ ಸತ್ಯಾಂಶ ಹೊರಬರಬೇಕಿದೆ.

# ಮೈದಾನದಲ್ಲಿಯೇ ಬೈಕ್ ಸವಾರಿ ನಡೆಸಿದ ಆರ್‌ಸಿಬಿ ಸ್ಟಾರ್ ಬ್ಯಾಟರ್ ಟಿಮ್ ಡೇವಿಡ್

ಆಸ್ಟ್ರೇಲಿಯಾ ಮತ್ತು ಬಾಂಗ್ಲಾದೇಶ ನಡುವಿನ ಮೂರನೇ ಟಿ20 ಪಂದ್ಯದಲ್ಲಿ ಆಸ್ಟ್ರೇಲಿಯಾ ನಾಯಕ ಮಿಚೆಲ್ ಮಾರ್ಷ್ ಸ್ಫೋಟಕ ಬ್ಯಾಟಿಂಗ್ ಪ್ರದರ್ಶಿಸಿ ತಂಡವನ್ನು ಭರ್ಜರಿ ಗೆಲುವಿನತ್ತ ಮುನ್ನಡೆಸಿದರು. ಮಾರ್ಷ್ ಕೇವಲ 28 ಎಸೆತಗಳಲ್ಲಿ ಅಜೇಯ 60 ರನ್‌ಗಳನ್ನು ಸಿಡಿಸಿ ಆಸ್ಟ್ರೇಲಿಯಾಕ್ಕೆ ಏಳು ವಿಕೆಟ್‌ಗಳ ಸುಲಭ ಜಯ ತಂದುಕೊಟ್ಟರು. ಈ ಮೂಲಕ ಆಸ್ಟ್ರೇಲಿಯಾ ಮೂರು ಪಂದ್ಯಗಳ ಟಿ20 ಸರಣಿಯನ್ನು 3-0 ಅಂತರದಲ್ಲಿ ಕ್ಲೀನ್ ಸ್ವೀಪ್ ಮಾಡುವಲ್ಲಿ ಯಶಸ್ವಿಯಾಯಿತು.

ಮಿರ್ಪುರ್‌ನಲ್ಲಿ ನಡೆದ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಬಾಂಗ್ಲಾದೇಶ ತಂಡ ಆಸ್ಟ್ರೇಲಿಯಾ ಬೌಲರ್‌ಗಳ ಶಿಸ್ತಿನ ದಾಳಿಗೆ ತತ್ತರಿಸಿ ಸ್ಪರ್ಧಾತ್ಮಕ ಮೊತ್ತ ಕಲೆಹಾಕಲು ವಿಫಲವಾಯಿತು. ಬಾಂಗ್ಲಾದೇಶ ನೀಡಿದ್ದ 110 ರನ್‌ಗಳ ಸಾಧಾರಣ ಗುರಿಯನ್ನು ಬೆನ್ನಟ್ಟಿದ ಆಸ್ಟ್ರೇಲಿಯಾ ಕೇವಲ 11 ಓವರ್‌ಗಳಲ್ಲೇ ಮೂರು ವಿಕೆಟ್ ಕಳೆದುಕೊಂಡು 112 ರನ್ ಗಳಿಸಿ ಜಯ ಸಾಧಿಸಿತು.

ಆಸ್ಟ್ರೇಲಿಯಾ ಪರ ಆರಂಭದಿಂದಲೇ ಆಕ್ರಮಣಕಾರಿ ಆಟವಾಡಿದ ಮಿಚೆಲ್ ಮಾರ್ಷ್ ಬಾಂಗ್ಲಾದೇಶ ಬೌಲರ್‌ಗಳ ಮೇಲೆ ಸವಾರಿ ನಡೆಸಿದರು. ಅವರ 60 ರನ್‌ಗಳ ಸಿಡಿಲಬ್ಬರದ ಇನ್ನಿಂಗ್ಸ್‌ನಲ್ಲಿ ಏಳು ಬೌಂಡರಿ ಹಾಗೂ ನಾಲ್ಕು ಭರ್ಜರಿ ಸಿಕ್ಸರ್‌ಗಳು ಸೇರಿದ್ದವು. ಕೇವಲ 23 ಎಸೆತಗಳಲ್ಲಿ ಅರ್ಧಶತಕ ಪೂರೈಸಿದ ಮಾರ್ಷ್ ತಮ್ಮ ಟಿ20 ಅಂತರರಾಷ್ಟ್ರೀಯ ವೃತ್ತಿಜೀವನದ



14ನೇ ಅರ್ಧಶತಕ ದಾಖಲಿಸಿದರು.

ಪಂದ್ಯಾನಂತರ ಮಾತನಾಡಿದ ಮಿಚೆಲ್ ಮಾರ್ಷ್, ಸರಣಿಯನ್ನು 3-0 ಅಂತರದಿಂದ ಗೆದ್ದಿರುವುದು ತಂಡಕ್ಕೆ ವಿಶೇಷ ಸಂತೋಷ ತಂದಿದೆ ಎಂದು ಹೇಳಿದರು. "ಈ ಸರಣಿಯನ್ನು ಸಂಪೂರ್ಣವಾಗಿ ನಮ್ಮದಾಗಿಸಿಕೊಂಡಿರುವುದಕ್ಕೆ ಖುಷಿಯಾಗಿದೆ. ತಂಡದ ಎಲ್ಲ ಆಟಗಾರರು ಉತ್ತಮ ಪ್ರದರ್ಶನ ನೀಡಿದ್ದಾರೆ. ವಿಶೇಷವಾಗಿ ಇಂದು ನಮ್ಮ ಬೌಲರ್‌ಗಳು ಅದ್ಭುತ ಕೆಲಸ ಮಾಡಿದ್ದಾರೆ. ಕೆಲ ಆಟಗಾರರು ಮೊದಲ ಬಾರಿಗೆ ಅವಕಾಶ ಪಡೆದರೆ, ಕೆಲವರು ದೀರ್ಘ ವಿರಾಮದ ಬಳಿಕ ತಂಡಕ್ಕೆ ಮರಳಿ ಉತ್ತಮ ಕೊಡುಗೆ ನೀಡಿದ್ದಾರೆ. ಒಟ್ಟಾರೆಯಾಗಿ ಇದು ಉತ್ತಮ ತಂಡದ ಪ್ರದರ್ಶನವಾಗಿತ್ತು" ಎಂದು ಅಭಿಪ್ರಾಯಪಟ್ಟರು.

ರನ್ ಚೇಸ್ ವೇಳೆ ಮಿಚೆಲ್ ಮಾರ್ಷ್ ಮತ್ತು ಜೋಶ್ ಇಂಗ್ಲಿಸ್ ಮೊದಲ ವಿಕೆಟ್‌ಗೆ ವೇಗದ 54 ರನ್‌ಗಳ ಜೊತೆಯಾಟ ನೀಡುವ ಮೂಲಕ ಆಸ್ಟ್ರೇಲಿಯಾಕ್ಕೆ ಭದ್ರ ಬುನಾದಿ ಹಾಕಿದರು. ಇವರಿಬ್ಬರ ಆಕ್ರಮಣಕಾರಿ ಬ್ಯಾಟಿಂಗ್‌ನಿಂದ ಬಾಂಗ್ಲಾದೇಶದ ಬೌಲರ್‌ಗಳು ಆರಂಭದಲ್ಲೇ ಒತ್ತಡಕ್ಕೆ ಸಿಲುಕಿದರು. ನಂತರ ಎಡಗೈ ಸ್ಪಿನ್ನರ್ ನಸುಮ್ ಅಹ್ಮದ್, ಜೋಶ್ ಇಂಗ್ಲಿಸ್ ಅವರನ್ನು 17 ರನ್‌ಗಳಿಗೆ ಔಟ್ ಮಾಡಿ ಜೊತೆಯಾಟಕ್ಕೆ ಬ್ರೇಕ್ ಹಾಕಿದರು.

ಆದರೆ ಮಾರ್ಷ್ ತಮ್ಮ ಸ್ಫೋಟಕ ಆಟವನ್ನು ಮುಂದುವರಿಸಿ ಪಂದ್ಯವನ್ನು ಸಂಪೂರ್ಣವಾಗಿ ಆಸ್ಟ್ರೇಲಿಯಾ ಪರ ಮಾಡಿದರು. ಅಂತಿಮ ಹಂತದಲ್ಲಿ ಟಿಮ್ ಡೇವಿಡ್ ಕೂಡ ಆಕ್ರಮಣಕಾರಿ ಆಟವಾಡಿ ಗೆಲುವನ್ನು ಸುಲಭಗೊಳಿಸಿದರು. ಬಾಂಗ್ಲಾದೇಶದ ಸ್ಪಿನ್ನರ್ ರಿಷದ್ ಹೊಸ್ಸೈನ್ ಎಸೆದ ಓವರ್‌ನಲ್ಲಿ ಸತತ ಎರಡು ಭರ್ಜರಿ ಸಿಕ್ಸರ್‌ಗಳನ್ನು ಸಿಡಿಸಿದ ಟಿಮ್ ಡೇವಿಡ್ ಆಸ್ಟ್ರೇಲಿಯಾದ ಗೆಲುವಿಗೆ ಮುದ್ರೆ ಒತ್ತಿದರು. ಆ ಹೊಡೆತಗಳೊಂದಿಗೆ ಆಸ್ಟ್ರೇಲಿಯಾದ ಸ್ಕೋರ್ 112/3ಕ್ಕೆ ತಲುಪಿತು.

ಟಿಮ್ ಡೇವಿಡ್ 12 ರನ್‌ಗಳೊಂದಿಗೆ ಅಜೇಯರಾಗಿ ಉಳಿದರೆ, ಹಿಂದಿನ ಪಂದ್ಯದಲ್ಲಿ 89 ರನ್‌ಗಳ ಅಮೋಘ ಇನ್ನಿಂಗ್ಸ್ ಆಡಿದ್ದ ಮ್ಯಾಟ್ ರೆನ್‌ಶಾ 6 ರನ್‌ಗಳೊಂದಿಗೆ ಅಜೇಯರಾಗಿ ಉಳಿದರು.

ಪಂದ್ಯದ ನಂತರ ಆಸ್ಟ್ರೇಲಿಯಾ ಆಟಗಾರರು ವಿಶಿಷ್ಟ ರೀತಿಯಲ್ಲಿ ಗೆಲುವಿನ ಸಂಭ್ರಮ ಆಚರಿಸಿದ್ದು ಎಲ್ಲರ ಗಮನ ಸೆಳೆಯಿತು. ಟಿಮ್ ಡೇವಿಡ್ ಮೈದಾನದಲ್ಲೇ ಬೈಕ್ ಸವಾರಿ ಮಾಡಿ ಸಂಭ್ರಮಿಸಿದರೆ, ಅವರೊಂದಿಗೆ ಮ್ಯಾಟ್ ರೆನ್‌ಶಾ ಕೂಡ ಬೈಕ್ ಮೇಲೆ ಕುಳಿತು ಮಿರ್ಪುರ್ ಕ್ರೀಡಾಂಗಣದ ಸುತ್ತ ಸುತ್ತಿದರು. ವೇಗಿ ನಾಥನ್ ಎಲ್ಲಿಸ್ ಮತ್ತೊಂದು ಬೈಕ್‌ನಲ್ಲಿ ಅವರನ್ನು ಹಿಂಬಾಲಿಸಿದರು. ಈ ದೃಶ್ಯ 2006ರಲ್ಲಿ ಪಾಕಿಸ್ತಾನ ವಿರುದ್ಧ ಸರಣಿ ಗೆದ್ದ ಬಳಿಕ ಭಾರತ ತಂಡದ ಮಾಜಿ ನಾಯಕ ಎಂಎಸ್ ಧೋನಿ ಮತ್ತು ಯುವರಾಜ್ ಸಿಂಗ್ ಮೈದಾನದಲ್ಲಿ ಬೈಕ್ ಓಡಿಸಿದ್ದ ಐತಿಹಾಸಿಕ ಕ್ಷಣವನ್ನು ನೆನಪಿಸಿತು.

ಈ ಸರಣಿಯಲ್ಲಿ ಆಸ್ಟ್ರೇಲಿಯಾ ಸಂಪೂರ್ಣ ಮೇಲುಗೈ ಸಾಧಿಸಿತು. ಮೊದಲ ಟಿ20 ಪಂದ್ಯದಲ್ಲಿ ನಾಲ್ಕು ವಿಕೆಟ್‌ಗಳ ಜಯ ಸಾಧಿಸಿದ್ದ ಆಸ್ಟ್ರೇಲಿಯಾ, ಎರಡನೇ ಪಂದ್ಯದಲ್ಲಿ ಏಳು ರನ್‌ಗಳ ಅಂತರದಿಂದ ಗೆದ್ದಿತ್ತು. ಮೂರನೇ ಪಂದ್ಯದಲ್ಲೂ ಭರ್ಜರಿ ಪ್ರದರ್ಶನ ನೀಡಿ ಸರಣಿಯನ್ನು ಕ್ಲೀನ್ ಸ್ವೀಪ್ ಮಾಡಿತು.

ಆದರೆ ಇದಕ್ಕೂ ಮುನ್ನ ನಡೆದ ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ ಬಾಂಗ್ಲಾದೇಶ 2-1 ಅಂತರದಿಂದ ಗೆಲುವು ಸಾಧಿಸಿತ್ತು. ಏಕದಿನ ಸರಣಿಯಲ್ಲಿ ಸೋಲು ಕಂಡಿದ್ದ ಆಸ್ಟ್ರೇಲಿಯಾ, ಟಿ20 ಸರಣಿಯಲ್ಲಿ ಬಲಿಷ್ಠ ಪ್ರದರ್ಶನ ನೀಡುವ ಮೂಲಕ ಅದಕ್ಕೆ ತಕ್ಕ ಪ್ರತಿಕ್ರಿಯೆ ನೀಡಿದ್ದು, ಬಾಂಗ್ಲಾದೇಶ ಪ್ರವಾಸವನ್ನು ಯಶಸ್ವಿಯಾಗಿ ಮುಗಿಸಿದೆ.

ಕಾನೂನು ವ್ಯವಹಾರಗಳು ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಮಾತ್ರ ಸೀಮಿತ – Judicial only Bengaluru rural district